ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಧ್ವನಿ ವರ್ಧಕದ ಮೂಲಕ ಪ್ರಾರ್ಥನೆ ಸಲ್ಲಿಸಲು ಅನುಮತಿ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) -

397 (242) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಮಸೀದಿಯಲ್ಲಿ 5 ಬಾರಿ ಧ್ವನಿವರ್ಧಕದ ಮೂಲಕ ಜೋರಾಗಿ ಪ್ರಾರ್ಥನೆ ಸಲ್ಲಿಸುವುದರಿಂದ ಮಕ್ಕಳಿಗೆ, ರೋಗಿಗಳಿಗೆ ಹಾಗೂ ವೃದ್ಧರಿಗೆ ತೊಂದರೆ ಉಂಟಾಗುತ್ತಿರುವ ಕುರಿತು ಎಷ್ಟು ದೂರುಗಳು ದಾಖಲಾಗಿವೆ; ಈ ಕುರಿತು ಯಾವ ಕ್ರಮ ಕೈಗೊಳ್ಳಲಾಗಿದೆ;

(ಆ) ಧ್ವನಿವರ್ಧಕವನ್ನು ಜೋರಾಗಿ ಬಳಸಬಾರದೆಂದು ಮಾನ್ಯ ನ್ಯಾಯಾಲಯಗಳು ಹೊರಡಿಸಿರುವ ಆದೇಶವನ್ನು ಪಾಲಿಸಲಾಗುತ್ತಿದೆಯೇ; ಧ್ವನಿವರ್ಧಕವನ್ನು ಬಳಸುವ ಕುರಿತು ಪೊಲೀಸ್ ಇಲಾಖೆಯಲ್ಲಿ ಇರುವ ನಿಯಮಗಳೇನು;

(ಇ) ಧ್ವನಿವರ್ಧಕಗಳನ್ನು ಬಳಸಲು ಅನುಮತಿ ನೀಡುವ ಅಧಿಕಾರಿ ಯಾರು; ಯಾವ ಯಾವ ಸಂದರ್ಭಗಳಲ್ಲಿ ಧ್ವನಿವರ್ಧಕಗಳನ್ನು ಬಳಸಲು ಅನುಮತಿ ನೀಡಲಾಗುತ್ತದೆ; ಖಾಯಂ ಆಗಿ ಧ್ವನಿವರ್ಧಕವನ್ನು ಅಳವಡಿಸಿ ದೊಡ್ಡ ಶಬ್ದದೊಂದಿಗೆ ಪ್ರಾರ್ಥನೆ ಸಲ್ಲಿಸಲು ಅನುಮತಿ ನೀಡಲಾಗಿದೆಯೇ; ಖಾಯಂ ಆಗಿ ಧ್ವನಿವರ್ಧಕಗಳನ್ನು ಅಳವಡಿಸಲು ನಿಯಮದಲ್ಲಿ ಅವಕಾಶ ಇದೆಯೇ;

(ಈ) ಖಾಯಂ ಆಗಿ ಅಳವಡಿಸಿರುವ ಧ್ವನಿವರ್ಧಕಗಳನ್ನು ತೆರವುಗೊಳಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?